# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 612
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 11.12.2025
4. ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನಲ್ಲಿ ನೆಲೆಸಿರುವ ಐಟಿ ಕಂಪನಿಯ ಹಿರಿಯ ಮಹಿಳಾ ಅಧಿಕಾರಿಯೊಬ್ಬರನ್ನು ಡ್ರಗ್ಸ್ ಪಾರ್ಸೆಲ್ ಬಂದಿದೆಯೆಂದು ಕರೆ ಮಾಡಿ, ಡ್ರಗ್ಸ್ ಪ್ರಕರಣದ ತನಿಖೆ ನೆಪದಲ್ಲಿ 6 ತಿಂಗಳ ಕಾಲ ಡಿಜಿಟಲ್ ಅರೆಸ್ಟ್‌ಗೆ ಒಳಪಡಿಸಿ, ಅವರಿಂದ 31.83 ಕೋಟಿ ರೂ. ದೋಚಿರುವ ಆಘಾತಕಾರಿ ಘಟನೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ.<br><br>ದಿನಾಂಕ: 15.09.2024 ರಿಂದ 23.03.2025ರವರೆಗಿನ ಪ್ರಕರಣವಾಗಿದ್ದು, ದಿನಾಂಕ:14.11.2025 ರಂದು ದೂರುದಾರರು ಪೂರ್ವ ವಿಭಾಗದ ಸೈಬರ್ ಕ್ರೈಂ ಪೊಲೀಸ್ ಠಾಣೆಗೆ ಬಂದು ಲಿಖಿತ ದೂರು ಸಲ್ಲಿಸಿದ ಮೇರೆಗೆ ಠಾಣೆಯಲ್ಲಿ ಮೊ.ಸಂ:379/2025 INFORMATION TECHNOLOGY ACT 2000 (U/s-66,66(C),66(D)); THE BHARATIYA NYAYA SANHITA (BNS), 2023 (U/s-308,318(4) ರೀತ್ಯಾ ಪ್ರಕರಣ ದಾಖಲು ಮಾಡಿಕೊಂಡು ತ್ವರಿತವಾಗಿ ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ. ಪ್ರಕರಣದಲ್ಲಿ ವಂಚನೆಗೊಳಗಾದ ಒಟ್ಟು ರೂ.31,83,44,000/- ಹಣವು 75 ವಿವಿಧ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆಯಾಗಿರುವುದು ಕಂಡು ಬಂದಿದ್ದು, ಸದರಿ ಬ್ಯಾಂಕ್ ಗಳಿಂದ ಕೆ.ವೈ.ಸಿ ಮಾಹಿತಿಯನ್ನು ಪಡೆದುಕೊಂಡು ಪ್ರಕರಣದಲ್ಲಿ ಭಾಗಿಯಾದ ಈ ಕೆಳಕಂಡ 04 ಆರೋಪಿಗಳನ್ನು ಬಂಧಿಸಲಾಗಿರುತ್ತದೆ:-<br>1. ಕಲಂಧರ ಷಾ ಬಿನ್ ಸಾಮ್ರಾಟ್ ಅಬ್ಬಾಸ್, 38 ವರ್ಷ<br>2. ಇಸ್ಮಾಯಿಲ್ ಎ ಬಿನ್ ಇಬ್ರಾಯಿಂ, 50 ವರ್ಷ<br>3. ಸಚಿನ್ ಬಿನ್ ಎಂ ಬಿನ್ ಸತೇಂದ್ರ, 28 ವರ್ಷ<br>4. ಜಮಾಲ್ ಉದ್ದೀನ್ ಬಿನ್ ಕೆ.ಎಂ ಉಮರ್, 42 ವರ್ಷ<br><br>ಈ ಪ್ರಕರಣದ ತನಿಖೆಯು ಮುಂದುವರೆದಿದ್ದು, ಇನ್ನುಳಿದ ಆರೋಪಿತರ ಮಾಹಿತಿ ಸಂಗ್ರಹಿಸಿ, ಅವರುಗಳನ್ನು ಪತ್ತೆ ಮಾಡಿ ದಸ್ತಗಿರಿ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ. ಪ್ರಸ್ತುತ ಪ್ರಕರಣವು ತನಿಖೆಯ ಹಂತದಲ್ಲಿದೆ. |
| (ಆ) | ಬಂದಿದ್ದಲ್ಲಿ, ರಾಜ್ಯದ ಅತೀ ಸುದೀರ್ಘ ಹಾಗೂ ದೊಡ್ಡ ಮೊತ್ತದ ವಂಚನೆಯ ಡಿಜಿಟಲ್ ಅರೆಸ್ಟ್ ಮಾಡಿದ ಕೇಸ್ ಇದಾಗಿದ್ದು, ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ವಂಚಕರನ್ನು ಈಗಾಗಲೇ ಪತ್ತೆ ಹಚ್ಚಲಾಗಿದೆಯೇ; ಹಾಗೂ ವಂಚನೆಯ ಹಣವನ್ನು ವಶಪಡಿಸಿಕೊಳ್ಳಲಾಗಿದೆಯೇ; | |
| (ಇ) | ರಾಜ್ಯದಲ್ಲಿ "ಡಿಜಿಟಲ್ ಅರೆಸ್ಟ್" ನಿಂದಾಗಿ ಅಮಾಯಕರ ಬ್ಯಾಂಕ್ ಖಾತೆಯಿಂದ ಕೋಟಿ ಕೋಟಿ ರೂಪಾಯಿ ವಂಚನೆ ಆಗುತ್ತಿದ್ದು, ನೊಂದವರು ಮಾನಸಿಕವಾಗಿ ಕುಗ್ಗುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಇವುಗಳ ಕಡಿವಾಣ ಹಾಕಲು ಸರ್ಕಾರ ವಿಫಲವಾಗಿದೆಯೇ; | ಡಿಜಿಟಲ್ ಅರೆಸ್ಟ್ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಕಡಿವಾಣ ಹಾಕಲು ಇತರ ಸಂಸ್ಥೆಗಳ (NCPCR, I4C , CERT-In, JCCTs ) ಸಹಭಾಗಿತ್ವದೊಂದಿಗೆ ಕೇಂದ್ರ ಹಾಗೂ ರಾಜ್ಯ ವಿಭಾಗಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮ ಜರುಗಿಸಲಾಗುತ್ತಿದೆ. |
| (ಈ) | ಡಿಜಿಟಲ್ ಅರೆಸ್ಟ್‌ಗೆ ಸಂಬಂಧಿಸಿದ ಹಲವಾರು ಪ್ರಕರಣಗಳು ದಿನನಿತ್ಯ ನಿರಂತರವಾಗಿ ವರದಿಯಾಗುತ್ತಿದ್ದು, ಕೋಟ್ಯಾಂತರ ರೂಪಾಯಿಗಳ ಹಣದ ಸುಲಿಗೆ ಅವ್ಯಾಹತವಾಗಿ ನಡೆಯುತ್ತಿದ್ದು, ಇದನ್ನು ತಡೆಯಲು | ಡಿಜಿಟಲ್ ಅರೆಸ್ಟ್‌ಗೆ ಸಂಬಂಧಿಸಿದಂತೆ ದಾಖಲಾಗಿರುವ ಪ್ರಕರಣಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ:-<br><br>ರಾಜ್ಯದಲ್ಲಿ ಇಂಟರ್‌ನೆಟ್, ಮೊಬೈಲ್ ಫೋನ್ |

| | | |
|---|---|---|
| | ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು: | ಮೂಲಕ ಆನ್‌ಲೈನ್ ವಂಚನೆಗೊಳಗಾಗುತ್ತಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಹಾಗೂ ಪ್ರತಿ ದಿನ ದಾಖಲಾಗುವ ಪ್ರಕರಣಗಳನ್ನು ಶೀಘ್ರವಾಗಿ ವಿಚಾರಣೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 177 ಪಿಓಪಿ 2024, ದಿನಾಂಕ:01/08/2025ರಲ್ಲಿ ರಾಜ್ಯದ 43 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು (Cyber Crime Police Station) ಮರು ಪದನಾಮೀಕರಿಸಿ ಆದೇಶಿಸಲಾಗಿದೆ. ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ Information Technology Act-2000 IPC/BNS ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗಧಿಪಡಿಸಿ ಅಧಿಸೂಚಿಸಲಾಗಿದೆ. |
| (ಉ) | "ಡಿಜಿಟಲ್ ಅರೆಸ್ಟ್" ವಂಚನೆಯ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಹಲವಾರು ಅಮಾಯಕರು ಈ ವಂಚನೆಯ ಜಾಲಕ್ಕೆ ಸಿಲುಕಿ, ಸಂಕಷ್ಟಕ್ಕೀಡಾಗುತ್ತಿರುವುದನ್ನು ತಡೆಯುವ ಸಲುವಾಗಿ ಜನರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು? | ➢ ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ಪತ್ತೆ ಹಚ್ಚುವ ಸಂಬಂಧ ಸೈಬರ್ ಕಮಾಂಡರ್ ಯುನಿಟ್ ರಚನೆಯಾಗಿರುತ್ತದೆ.<br>➢ ರಾಜ್ಯದಲ್ಲಿ DGP ಸೈಬರ್ ಕಮಾಂಡ್ ಹುದ್ದೆ ಸೃಜಿಸಲಾಗಿದೆ. ಇವರು ಸೈಬರ್ ಕ್ರೈಂ ಪೊಲಿಸ್ ಠಾಣೆಗಳ ಕಮಾಂಡಿಂಗ್ ಅಧಿಕಾರಿಯಾಗಿರುತ್ತಾರೆ. ಎಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ನೇರವಾಗಿ ಇವರಿಗೆ ವರದಿ ಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಈ ಕ್ರಮದಿಂದ ಸೈಬರ್ ಅಪರಾಧಗಳ ತನಿಖಾ ವೇಗ ಹೆಚ್ಚುತ್ತಿದೆ.<br>➢ ಸಿಐಡಿ ಅಡಿಯಲ್ಲಿ ಸೈಬರ್ ಕ್ರೈಂ ವಿಭಾಗವು ರಾಜ್ಯದ ಸೈಬರ್ ಅಪರಾಧ ತನಿಖೆಗೆ ಕೇಂದ್ರ ಕಛೇರಿ ಆಗಿದ್ದು, ಇತರ ಘಟಕಗಳೊಂದಿಗೆ ಸಮನ್ವಯ ಮಾಡುತ್ತದೆ.<br>➢ ಡಿಜಿಟಲ್ ಅರೆಸ್ಟ್ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಗೃಹ ಸಚಿವಾಲಯದ ಎನ್.ಸಿ.ಆರ್.ಪಿ (National Cyber Crime Reporting Portal) ನಲ್ಲಿ ದೂರುಗಳನ್ನು ದಾಖಲಿಸಲು ಸಾರ್ವಜನಿಕರಿಗೆ ಅವಕಾಶವಿದ್ದು, ದೂರುಗಳನ್ನು ದಾಖಲಿಸಿದ ನಂತರ ಮಾಹಿತಿಯನ್ನು ಸದರಿ ಪೋರ್ಟಲ್ ಮುಖಾಂತರ ಪಡೆದುಕೊಂಡು ತನಿಖೆಯನ್ನು ಕೈಗೊಂಡಿರುತ್ತದೆ.<br>➢ ಡಿಜಿಟಲ್ ಮತ್ತು ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾದ ನ್ಯಾಯಾಲಯವನ್ನು ಸೃಜನೆ ಮಾಡಲಾಗಿರುತ್ತದೆ.<br>➢ ಪ್ರತಿ ಸೈಬರ್ ಠಾಣೆಯಲ್ಲಿ ಸೈಬರ್ ಕ್ರೈಂ ಗೆ ಸಂಬಂಧಿಸಿದಂತೆ ಪ್ರಕರಣಗಳ ತನಿಖೆಯನ್ನು ಕೈಗೊಳ್ಳಲು ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆಯನ್ನು ಡಿವೈಎಸ್ಪಿ/ಎಸಿಪಿ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಲಾಗಿದೆ.<br>➢ ಠಾಣಾ ಸರಹದ್ದಿನಲ್ಲಿ ಬರುವಂತಹ ಕಂಪನಿಗಳು, ಶಾಲಾ-ಕಾಲೇಜುಗಳು, ಅಪಾರ್ಟ್‌ಮೆಂಟ್ ಮತ್ತು ಪಾರ್ಕ್ ಮುಂತಾದ ಸ್ಥಳಗಳಲ್ಲಿ ಸೈಬರ್ ಕ್ರೈಂ ಬಗ್ಗೆ ಅರಿವು ಮೂಡಿಸಲು ಜಾಗೃತಿ ಕಾರ್ಯ ಕ್ರಮಗಳನ್ನು ಕೈಗೊಂಡಿರುತ್ತದೆ.<br>➢ ಟಿವಿ-ಮಾಧ್ಯಮ ಮತ್ತು ಪತ್ರಿಕಾ / ಮುದ್ರಣ (Print Media) ಮಾಧ್ಯಮಗಳಲ್ಲಿ ಡಿಜಿಟಲ್ ಅರೆಸ್ಟ್ ಬಗ್ಗೆ ಜಾಹಿರಾತು , ವರದಿಗಳನ್ನು ನೀಡಲಾಗಿರುತ್ತದೆ. |

| | | |
|---|---|---|
| | | ➢ ಬ್ಯಾಂಕ್‌ಗಳ ನೋಡಲ್ ಅಧಿಕಾರಿಗಳಿಗೆ ಮಾಸಿಕ ಸಭೆಗಳನ್ನು ಆಯೋಜಿಸಿ ಸೈಬರ್ ಪ್ರಕರಣಗಳಲ್ಲಿ ಭಾಗಿಯಾಗುವ ಖಾತೆಗಳ ಮೇಲೆ ನಿಗಾವಹಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. ಸಿಸಿಯು ಘಟಕದಿಂದ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವಿಟರ್‌ಗಳಲ್ಲಿ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br>➢ ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧ ಪ್ರಕರಣಗಳಲ್ಲಿ ಆರೋಪಿಗಳ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಲು ಐಟಿ ಕಾಯ್ದೆ ಹಾಗೂ BNS ಕಾಯ್ದೆಯ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆ ಮಾಡಿ, 268-ಫೇಸ್‌ಬುಕ್, 61-ವಾಟ್ಸ್ ಆಪ್ ಗುಂಪುಗಳನ್ನು, 465-ಟೆಲಿಗ್ರಾಂ ಹಾಗೂ 15-ಇನ್‌ಸ್ಟಾಗ್ರಾಂ ಖಾತೆಗಳು ನಿಷ್ಕ್ರಿಯಗೊಳಿಸಲಾಗಿರುತ್ತದೆ.<br>➢ ಪ್ರತಿ ಜಿಲ್ಲೆ ಹಾಗೂ ನಗರ ವ್ಯಾಪ್ತಿಗಳಲ್ಲಿ ಒಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಸಿ.ಪಿ.ಎಸ್ ಪೊಲೀಸ್ ಠಾಣೆ) ತೆರೆಯಲಾಗಿರುತ್ತದೆ. ಅಲ್ಲದೆ, ಪ್ರತಿ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br>➢ ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ "Centre for Cyber Crime Investigation & Digital Forensic Training & Research" ಘಟಕವನ್ನು ಪ್ರಾರಂಭಿಸಲಾಗಿದ್ದು, Data Security Council of India ರವರ ಸಹಯೋಗದೊಂದಿಗೆ ವಿಶೇಷ ಸೈಬರ್ ಪೊಲೀಸ್ ಠಾಣೆಯ ಅಧಿಕಾರಿ/ಸಿಬ್ಬಂದಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗುತ್ತಿದೆ.<br>➢ ಡಿಜಿಟಲ್ ಅರೆಸ್ಟ್ ಕುರಿತಾದ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ, ಪೊಲೀಸ್ ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಡಿಜಿಟಲ್ ಅರೆಸ್ಟ್ ಕುರಿತಂತೆ ರಾಜ್ಯದ ಎಲ್ಲಾ ಟೆಲಿಕಾಮ್ ಸೇವಾದಾರರನ್ನು (TSP) ಸಂಪರ್ಕಿಸಿ ಅವರ ಗ್ರಾಹಕರಿಗೆ ಬ್ಯಾಂಕಿಂಗ್ ಡಿಟೇಲ್ಸ್ ಮತ್ತು ಪಾಸ್‌ವರ್ಡ್‌ನ್ನು ಯಾರಿಗೂ ನೀಡಬಾರದೆಂದು ಸಮೂಹ ಸಂದೇಶಗಳನ್ನು (Group Messages) ರವಾನಿಸುವ ಮೂಲಕ ಸಾರ್ವಜನಿಕ |

| | | |
|---|---|---|
| | | ಗ್ರಾಹಕರಿಗೆ ಜಾಗೃತಿ ಮೂಡಿಸಲಾಗಿರುತ್ತದೆ.<br>➢ ಸಿಐಡಿ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ ಕಳೆದ ಹಲವು ವರ್ಷಗಳಿಂದ ಮಿಲಿಟರಿ, ಬ್ಯಾಂಕಿಂಗ್ ಸೆಕ್ಟರ್, ಸರ್ಕಾರಿ ಸಂಸ್ಥೆಗಳು, ನ್ಯಾಯಾಂಗದ ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸೈಬರ್ ಕ್ರೈಂ ಅಪರಾಧಗಳನ್ನು ತಡೆಗಟ್ಟುವ, ಪತ್ತೆ ಮತ್ತು ತನಿಖೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗುತ್ತಿದೆ.<br>➢ ಸೈಬರ್ ಜಾಗೃತಿ ಸಪ್ತಾಹವನ್ನು ಆಚರಿಸುವ ಮೂಲಕ ಕರಪತ್ರಗಳನ್ನು ಮುದ್ರಿಸಿ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ಆರ್ಥಿಕ ಸ್ವರೂಪದ ಸೈಬರ್ ಅಪರಾಧವನ್ನು ತಡೆಗಟ್ಟಲು ಉಚಿತ ಸಹಾಯವಾಣಿ (ಟೋಲ್ ಫ್ರೀ) ಸಂ: 1930 ಕರೆ ಮಾಡಿ ದೂರು ದಾಖಲಿಸುವ ಹಾಗೂ ವಂಚನೆಗೆ ಬಳಕೆಯಾಗುವ ಬ್ಯಾಂಕ್ ಖಾತೆಗಳನ್ನು ತನಿಖೆಯ ಸಲುವಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಯೋಜನೆಯನ್ನು ಜಾರಿಗೆ ತರಲಾಗಿದೆ.<br>➢ ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧ ನಿಯಂತ್ರಣ ಹಾಗೂ ಜಾಗೃತಿ ಕುರಿತು KSP website & KSP app ನಲ್ಲಿ ವಿವಿಧ ರೀತಿಯ ಸೈಬರ್ ಅಪರಾಧಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗಿದೆ. |

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು

ಒಇ 69 ಪಿಎನ್‌ಡಿ 2025 (ಇ)